# ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ

**ಸಿಸಿ ಸಂಖ್ಯೆಃ 37/2021**

**ಪಿರ್ಯಾದಿದಾರರುಃ** ರಾಜ್ಯ ಪರ ಪೊಲೀಸರು,
ಚನ್ನರಾಯಪಟ್ಟಣ ನಗರ ಪೋಲೀಸ್ ಠಾಣೆ

**ವಿರುದ್ದ**

**ಆರೋಪಿತ/ರುಃ** ಶ್ರೀನಿವಾಸ ಉಃ ಅಡಗೂರು ಶ್ರೀನಿವಾಸ,
ಬಿನ್ ರಾಮೇಗೌಡ,
42 ವರ್ಷ ವಯಸ್ಸು,
ವಾಸಃ ಅಡಗೂರು ಗ್ರಾಮ,
ಕಸಬಾ ಹೋಬಳಿ,
ಚನ್ನರಾಯಪಟ್ಟಣ ತಾಲ್ಲೂಕು, ಹಾಸನ.

## ದೋಷಾರೋಪಣೆ

**ದೀಪು ಬಿ.ಸಿ.**, ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಚನ್ನರಾಯಪಟ್ಟಣ ಆದ ನಾನು ಆರೋಪಿ/ಗಳಾದ ನಿಮ್ಮ ಮೇಲೆ ಹೊರಿಸುವ ದೋಷಾರೋಪಣೆ ಏನೆಂದರೆ,

ದಿನಾಂಕ 07.08.2020 ರಂದು ಮದ್ಯಾಹ್ನ 1.00 ಗಂಟೆ ಸಮಯದಲ್ಲಿ ಚನ್ನರಾಯಪಟ್ಟಣ ನಗರ ಪೋಲೀಸ್ ಠಾಣಾ ಸರಹದ್ದಿಗೆ ಸೇರಿದ, ಚನ್ನರಾಯಪಟ್ಟಣ ಟೌನ್, ತಾಲ್ಲೂಕು ಕಚೇರಿಯಲ್ಲಿ ಸಾಕ್ಷಿ.1 ರವರು ತಮ್ಮ ಕಚೇರಿ ಕಡತದ ಬಗ್ಗೆ ಮಾಹಿತಿ ಪಡೆಯಲು ಆಡಳಿತ ಸಾಕ್ಷಿ.2 ರವರ ಬಳಿ ಹೋಗಿದ್ದು, ಆ ವೇಳೆಯಲ್ಲಿ ಅಲ್ಲಿಗೆ ಬಂದ ಆರೋಪಿಯಾದ ನೀವು ಸಾಕ್ಷಿ.1 ರವರನ್ನು ಕುರಿತು ಸಾಕ್ಷಿ.2 ರವರಲ್ಲಿ ಇವರನ್ನೆಲ್ಲಾ ಇಲ್ಲಿ ಏಕೆ ಕೂರಿಸಿದ್ದೀರಾ ಎಂದು ಕೇಳಿ, ಸಾಕ್ಷಿ.2 ರವರ ಬಳಿಯಲ್ಲಿ ಯಾವುದೋ ವಿಚಾರದಲ್ಲಿ ಗಲಾಟೆ ಮಾಡಿ ಸಾಕ್ಷಿ.2 ರವರನ್ನು ಕುರಿತು ಅವರು ಕುಪಿತರಾಗಿ

ಶಾಂತಿಭಂಗವನ್ನುಂಟುಮಾಡಲಿ ಎಂಬ ಉದ್ದೇಶದಿಂದ, ಸಾಕ್ಷಿ.2 ರವರಿಗೆ ಬೇವರ್ಸಿಗಳ ಎಂದು ಅವಾಚ್ಯ ಶಬ್ದಗಳಿಂದು ಬೈದು, ಆ ಮೂಲಕ ಆರೋಪಿಯಾದ ನೀವು **ಭಾರತೀಯ ದಂಡ ಸಂಹಿತೆ ಕಲಂಃ 504** ರಡಿಯಲ್ಲಿ ದಂಡನೀಯವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಬರುವಂತೆ ಎಸಗಿರುತ್ತೀರಿ.

**2**) ಅದೇ ದಿನ, ಅದೇ ಸ್ಥಳ, ಅದೇ ಸಮಯದಲ್ಲಿ, ಸಾಕ್ಷಿ.1 ರವರು ಏಕೆ ಬೈಯ್ಯುತ್ತಿದ್ದೀಯಾ ಎಂದು ಕೇಳಿದ್ದಕ್ಕೆ ಆರೋಪಿಯಾದ ನೀವು ಸಾಕ್ಷಿ.1 ರವರಿಗೆ ನೀನು ಯಾರೋ ಕೇಳುವುದಕ್ಕೆ ಎಂದು ಸಾಕ್ಷಿ.1 ರವರ ಮೇಲೆ ಗಲಾಟೆ ಮಾಡಿ, ನಿಮ್ಮ ಸ್ವಇಚ್ಚೆಯಿಂದ ನಿಮ್ಮ ಕೈಗಳಿಂದ ಸಾಕ್ಷಿ.1 ರವರ ಮೈಕೈಗೆ ಹೊಡೆದು ಸಾಮಾನ್ಯ ಸ್ವರೂಪದ ಗಾಯಪಡಿಸಿ, ಆ ಮೂಲಕ ಆರೋಪಿಯಾದ ನೀವು **ಭಾರತೀಯ ದಂಡ ಸಂಹಿತೆ ಕಲಂಃ 323** ರಡಿಯಲ್ಲಿ ದಂಡನೀಯವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಬರುವಂತೆ ಎಸಗಿರುತ್ತೀರಿ.

**3**) ಅದೇ ದಿನ, ಅದೇ ಸ್ಥಳ, ಅದೇ ಸಮಯದಲ್ಲಿ ಆರೋಪಿಯಾದ ನೀವು, ಲೋಕನೌಕರರಾದ ಸಾಕ್ಷಿ.1 ಮತ್ತು 2 ರವರಿಗೆ ತಮ್ಮ ಕರ್ತವ್ಯ ನಿರ್ವಹಿಸದಂತೆ ಸರ್ಕಾರಿ ಕರ್ತವ್ಯಕ್ಕೆ ಅಡ್ಡಿಪಡಿಸಿ, ಆ ಮೂಲಕ ಆರೋಪಿಯಾದ ನೀವು **ಭಾರತೀಯ ದಂಡ ಸಂಹಿತೆ ಕಲಂಃ 353** ರಡಿಯಲ್ಲಿ ದಂಡನೀಯವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಬರುವಂತೆ ಎಸಗಿರುತ್ತೀರಿ.

ದಿನಾಂಕಃ **09.11.2022**

(ದೀಪು ಬಿ.ಸಿ.)
ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ.

**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ**

**ಸಿಸಿ ಸಂಖ್ಯೆ: 37/2021**

**ಪಿರ್ಯಾದಿದಾರರು:** ರಾಜ್ಯ ಪರ ಪೊಲೀಸರು,
ಚನ್ನರಾಯಪಟ್ಟಣ ನಗರ ಪೋಲೀಸ್ ಠಾಣೆ

**ವಿರುದ್ಧ**

**ಆರೋಪಿತ/ರು:** ಶ್ರೀನಿವಾಸ ಉ: ಅಡಗೂರು ಶ್ರೀನಿವಾಸ,
ಬಿನ್ ರಾಮೇಗೌಡ,
42 ವರ್ಷ ವಯಸ್ಸು,
ವಾಸ: ಅಡಗೂರು ಗ್ರಾಮ, ಕಸಬಾ ಹೋಬಳಿ,
ಚನ್ನರಾಯಪಟ್ಟಣ ತಾಲ್ಲೂಕು, ಹಾಸನ.

**ದೋಷಾರೋಪಣೆ**

**ಪ್ರಶ್ನೆ:** 1. ಈಗ ನಿಮಗೆ ಓದಿ ಹೇಳಲಾದ ನಿಮ್ಮ ಮೇಲಿನ ದೋಷಾರೋಪಣೆ ನಿಮಗೆ ತಿಳಿಯಿತೆ?

ಉತ್ತರ: ಅರ್ಥವಾಯಿತು

**ಪ್ರಶ್ನೆ:** 2. ನೀವು ನಿಮ್ಮ ತಪ್ಪನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆ ನಡೆಯಲೆಂದು ಬಯಸುತ್ತೀರಾ?

ಉತ್ತರ: ವಿಚಾರಣೆಯಾಗಬೇಕು

(ಈ ದೋಷರೋಪಣೆಯನ್ನು ತೆರೆದ ನ್ಯಾಯಾಲಯದಲ್ಲಿ ಆರೋಪಿ/ಗಳಿಗೆ ತಿಳಿದಿರುವ ಭಾಷೆಯಲ್ಲಿ ಓದಿ ಹೇಳಿ ಕೇಳಲಾಗಿ ಆರೋಪಿ/ಗಳು ನೀಡಿರುವ ಉತ್ತರಗಳನ್ನು ಪಡೆದುಕೊಂಡಿದ್ದು ಅವು ಸರಿ ಇವೆ ಎಂದು ದೃಢೀಕರಿಸಲಾಯಿತು)

ದಿನಾಂಕ: **09.11.2022**

(ದೀಪು ಬಿ.ಸಿ.)
ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ.